ಕರ್ನಾಟಕ ಸರ್ಕಾರ

ರಾಷ್ಟ್ರೀಯ ಆರೋಗ್ಯ ಅಭಿಯಾನ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ

ಕೆ.ಎನ್.ಟಿ.ಬಿ. ಸ್ಯಾನಿಟೋರಿಯಂ ಆಸ್ಪತ್ರೆ ಆವರಣ,ಬಂಗಾರಪೇಟೆ ರಸ್ತೆ, ಕೋಲಾರ – 563102

ಸಂಖ್ಯೆ:ಡಿಹೆಚ್ಎಸ್/ಎನ್ಹೆಚ್ಎಂ/MHU/ಕೋ/ಗು.ನೇ/01/2025-26 ದಿನಾಂಕ: 16-11-2026

ಪ್ರಕಟಣೆ

ಎನ್ಹೆಚ್ಎಂ ಕಾರ್ಯಕ್ರಮದ ಸಂಚಾರಿ ಆರೋಗ್ಯ ಘಟಕಕ್ಕೆ ಹೊಸದಾಗಿ ಅನುಮೋದನೆಯಾಗಿರುವ ಈ ಕೆಳಕಂಡ ವಿವಿಧ ವೃಂದದ ಹುದ್ದೆಗಳನ್ನು ವಿದ್ಯಾರ್ಹತೆ ಹಾಗೂ ಷರತ್ತುಗಳನ್ನೊಳಗೊಂಡಂತೆ 2026-27 ನೇ ಸಾಲಿಗೆ ಗುತ್ತಿಗೆ ಆಧಾರದ ಮೇಲೆ ನೇರ ಸಂದರ್ಶನ ಮೂಲಕನೇಮಕ ಮಾಡಿಕೊಳ್ಳಲಾಗುವುದು.

ಕ್ರ.ಸಂ.	ಹುದ್ದೆ	ವಿದ್ಯಾರ್ಹತೆ	ಅನುಭವದ ವಿವರ ಮತ್ತು ವಯೋಮಿತಿ	ಮಾಸಿಕ ವೇತನ	ಹುದ್ದೆ ಸಂಖ್ಯೆ
1	ಎಂ.ಬಿ.ಬಿ.ಎಸ್ ವೈದ್ಯಾಧಿಕಾರಿಗಳು	ಎಂ.ಬಿ.ಬಿ.ಎಸ್ ಉತ್ತೀರ್ಣರಾಗಿರಬೇಕು ಹಾಗೂ ಕಡ್ಡಾಯವಾಗಿIntershipಪೂರ್ಣಿಸಿರಬೇಕು.ಕೆ.ಎಂ.ಸಿ ನೋಂದಣಿ ಹೊಂದಿರತಕ್ಕದ್ದು. ಸಂಬಂಧಪಟ್ಟ ವಿಶ್ವ ವಿದ್ಯಾನಿಲಯದಿಂದ Convocation/Degree certificate ಹೊಂದಿರಬೇಕು.	ಕನಿಷ್ಠ ಎರಡು ವರ್ಷಗಳ ಸೇವೆ ಸಲ್ಲಿಸಿರುವ ಅನುಭವವನ್ನು ಹೊಂದಿರಬೇಕು ವಯೋಮಿತಿ:ಗರಿಷ್ಠ 65 ವರ್ಷ	60000/-	1
2	ಪ್ರಯೋಗ ಶಾಲಾ ತಂತ್ರಜ್ಞರು	ಎಸ್ಎಸ್ಎಲ್ಸಿ/ಪಿಯುಸಿ ಮತ್ತು ಪ್ರಯೋಗಶಾಲಾ ತಂತ್ರಜ್ಞತೆಯ ಡಿಪ್ಲೋಮೋ ಉತ್ತೀರ್ಣ ಹೊಂದಿರಬೇಕು. ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯ ನೋಂದಣಿ ಮತ್ತು ಕಂಪ್ಯೂಟರ್ ಸಾಕ್ಷರತೆಯನ್ನು ಹೊಂದಿರಬೇಕು.	ಕನಿಷ್ಠ ಎರಡು ವರ್ಷಗಳ ಸೇವೆ ಸಲ್ಲಿಸಿರುವ ಅನುಭವವನ್ನು ಹೊಂದಿರಬೇಕು ವಯೋಮಿತಿ:ಗರಿಷ್ಠ 45 ವರ್ಷ	12525/-	1

ದಿನಾಂಕ:- 30-11-2026 ರಂದು ಬೆಳಿಗ್ಗೆ 10:00 ಗಂಟೆಗೆ ಆಸಕ್ತಿಯುಳ್ಳ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ತಮ್ಮ ಮೂಲ ದಾಖಲೆಗಳೊಂದಿಗೆ 1 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ ಕೆ.ಎನ್.ಟಿ.ಬಿ.ಸ್ಯಾನಿಟೋರಿಯಂ ಆಸ್ಪತ್ರೆ ಆವರಣ, ಬಂಗಾರಪೇಟೆ ರಸ್ತೆ, ಕೋಲಾರ ಇಲ್ಲಿಗೆ ಹಾಜರಾಗುವುದು.(ಈ ಆಯ್ಕೆಯು ಎನ್ಹೆಚ್ಎಂ ನಿಯಮಾವಳಿ ಷರತ್ತು ಮತ್ತು ನಿಬಂಧನೆಗೆ ಒಳಪಟ್ಟಿರುತ್ತದೆ.)

ಸೂಚನೆ:-

1) ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಯಾದರೂ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.
2) ರೋಸ್ಟರ್ ಕಮ್ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
3) ನೇರ ಸಂದರ್ಶನದ ದಿನಾಂಕದಂದು ಬೆಳಿಗ್ಗೆ 10:00 ರಿಂದ ಅಪರಾಹ್ನ 02:00 ಗಂಟೆ ಒಳಗಾಗಿ ಸಂದರ್ಶನ ಸ್ಥಳದಲ್ಲಿ ಹೆಸರನ್ನು ನೊಂದಾಯಿಸಿಕೊಂಡ ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಪರಿಗಣಿಸಲಾಗುವುದು.
4) ನೇರ ಸಂದರ್ಶನದ ದಿನಾಂಕದಂದು ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 02.00 ಗಂಟೆಯೊಳಗಾಗಿ ಅರ್ಜಿಯನ್ನು ಪಡೆದು ಅದರಂತೆ ಎಸ್.ಎಸ್.ಎಲ್.ಸಿ/ಪಿ.ಯು.ಸಿ/MBBS/Diploma in Medical Laboratory Technology ನ ಅಂಕ ಪಟ್ಟಿಗಳು, ಕೋರ್ಸ್ ಕಂಪ್ಲೀಷನ್ ಸರ್ಟಿಫಿಕೆಟ್, ಜಾತಿ ಪ್ರಮಾಣ ಪತ್ರ, ಕಂಪ್ಯೂಟರ್ ಲಿಟ್ರೆಸಿ ಪ್ರಮಾಣ ಪತ್ರ, ಅನುಭವ ಪ್ರಮಾಣ ಪತ್ರ ಇತರೆ ಎಲ್ಲಾ ದಾಖಲಾತಿಗಳನ್ನು ಹಾಜರುಪಡಿಸುವುದು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು
ಕೋಲಾರ ಜಿಲ್ಲೆ, ಕೋಲಾರ